# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# Bruhat Bengaluru Mahanagara Palike

| ವಿಶೇಷ ಆಯುಕ್ತರು (ಆರೋಗ್ಯ & ಮಾ.ತಂ.) ರವರ ಕಛೇರಿ<br>ಕೇಂದ್ರ ಕಛೇರಿ ಆವರಣ, ನ.ರಾ.ಚೌಕ್<br>ಬೆಂಗಳೂರು-560 002 | 1) ಎಲ್ಲಾ ವಲಯಗಳ ಜಂಟಿ ಆಯುಕ್ತರು<br>2) ಎಲ್ಲಾ ವಲಯಗಳ ಆರೋಗ್ಯಾಧಿಕಾರಿಗಳು,<br>3) ಎಲ್ಲಾ ವಿಭಾಗದ ಆರೋಗ್ಯ ವೈದ್ಯಾಧಿಕಾರಿಗಳು<br>4) ಆರ್.ಸಿ.ಹೆಚ್. ಅಧಿಕಾರಿಗಳು |
|---|---|
| ಸಂಖ್ಯೆ:ವಿ.ಆ(ಆ)/ಪಿ.ಆರ್/ 54 /2021-2022<br>ದಿನಾಂಕ: 17/04/2021. | |

**:ಆಂತರಿಕ ಕಛೇರಿ ಟಿಪ್ಪಣಿ:**

ವಿಷಯ: ಪಾಲಿಕೆಯ ವ್ಯಾಪ್ತಿಯಲ್ಲಿ ನಮ್ಮ ಬೆಂಗಳೂರು ಫೌಂಡೇಷನ್ ಸಹಯೋಗದೊಂದಿಗೆ ಕೋವಿಡ್-19 ಲಸಿಕಾಕರಣ ಕ್ಯಾಂಪ್‌ಗಳನ್ನು ಏರ್ಪಡಿಸುವ ಬಗ್ಗೆ.

ಉಲ್ಲೇಖ: ನಮ್ಮ ಬೆಂಗಳೂರು ಫೌಂಡೇಷನ್ ರವರು ಇ-ಮೇಲ್ ಮೂಲಕ ಸಲ್ಲಿಸಿರುವ ಮನವಿ.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಮ್ಮ ಬೆಂಗಳೂರು ಫೌಂಡೇಷನ್.ರವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವಲಯಗಳಲ್ಲಿ ಕೋವಿಡ್-19 ಲಸಿಕಾಕರಣ ಕ್ಯಾಂಪ್‌ಗಳನ್ನು ಏರ್ಪಡಿಸಲು ಪಾಲಿಕೆಯೊಂದಿಗೆ ಕೈಜೋಡಿಸಲು ಆಸಕ್ತರಿರುವುದಾಗಿ ಉಲ್ಲೇಖಿತ ಇ-ಮೇಲ್ ಪತ್ರದಲ್ಲಿ ತಿಳಿಸಿರುತ್ತಾರೆ.

ಕೋವಿಡ್-19 ತಡೆಗಟ್ಟುವ ನಿಟ್ಟಿನಲ್ಲಿ ಲಸಿಕಾಕರಣ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಟಾನಗೊಳಿಸಬೇಕಾಗಿರುವುದರಿಂದ ಸದರಿಯವರ ಮನವಿಯನ್ನು ಪರಿಗಣಿಸಿ, ಎಲ್ಲಾ ವಲಯಗಳ ಆರೋಗ್ಯಾಧಿಕಾರಿಗಳು, ಎಲ್ಲಾ ವಿಭಾಗದ ಆರೋಗ್ಯ ವೈದ್ಯಾಧಿಕಾರಿಗಳು ಮತ್ತು ಎಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳು ನಮ್ಮ ಬೆಂಗಳೂರು ಫೌಂಡೇಷನ್ ರವರಿಗೆ ಸಂಪೂರ್ಣ ಸಹಕಾರ ನೀಡಿ ಸಮನ್ವಯತೆ ಸಾಧಿಸಿ ಲಸಿಕಾಕರಣ ಕಾರ್ಯವನ್ನು ಯಶಸ್ವಿಯಾಗಿ ಹಮ್ಮಿಕೊಂಡು ಪಾಲಿಕೆಯ ವ್ಯಾಪ್ತಿಯಲ್ಲಿ ಲಸಿಕಾಕರಣ ಕಾರ್ಯದಲ್ಲಿ ಹೆಚ್ಚಿನ ಪ್ರಗತಿ ಸಾಧಿಸಲು ಈ ಮೂಲಕ ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದ ಮೇರೆಗೆ)

ವಿಶೇಷ ಆಯುಕ್ತರು (ಆರೋಗ್ಯ & ಮಾ.ತಂ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

**ಪ್ರತಿಯನ್ನು:**

1) ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಮಾನ್ಯರ ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
2) ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಮಾನ್ಯರ ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
3) ಎಲ್ಲಾ ವಲಯ ಆಯುಕ್ತರುಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ರವಾನಿಸಿದೆ.
4) ಮುಖ್ಯ ಆರೋಗ್ಯಾಧಿಕಾರಿ (ಸಾ.ಆ)ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
5) ನಮ್ಮ ಬೆಂಗಳೂರು ಫೌಂಡೇಷನ್ ರವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಕಛೇರಿ ಕಡತಕ್ಕೆ